ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಗುರುವಾರ,ದಿನಾಂಕ : 25ನೇ ಜುಲೈ, 2019

12. ರಾಜ್ಯದಲ್ಲಿ ಟೆಕ್ಸ್‌ಟೈಲ್ ಪಾರ್ಕ್ ಸ್ಥಾಪನೆ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

594 (757 ) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ಆಯವ್ಯಯದಲ್ಲಿ ಹಲವಾರು ಬಾರಿ ಟೆಕ್ಸ್‌ಟೈಲ್ ಪಾರ್ಕ್ ( Textile Park) ಸ್ಥಾಪಿಸುವ ಬಗ್ಗೆ ಪ್ರಸ್ತಾಪಿಸಿ ಅವುಗಳನ್ನು ಅನುಷ್ಠಾನಕ್ಕೆ ತರದಿರುವುದು ನಿಜವೇ ;

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ಟೆಕ್ಸ್‌ಟೈಲ್ ಪಾರ್ಕ್‌ಗಳನ್ನು (Textile Park) ಪ್ರಾರಂಭಿಸಲಾಗಿದೆ ; (ಸ್ಥಳಗಳೊಂದಿಗೆ ವಿವರವನ್ನು ನೀಡುವುದು)

(ಇ) ಈ ಟೆಕ್ಸ್‌ಟೈಲ್ ಪಾರ್ಕ್ (Textile Park) ಸ್ಥಾಪನೆಯಿಂದ ಟೆಕ್ಸ್‌ಟೈಲ್ ಪಾರ್ಕ್ ಉದ್ಯಮದಲ್ಲಿ ಎಷ್ಟರ ಮಟ್ಟಿಗೆ ಅಭಿವೃದ್ಧಿಯಾಗಿದೆ ; (ಉತ್ಪಾದನೆವಾರು ವಿವರ ನೀಡುವುದು)

(ಈ) ರಾಜ್ಯದ ಉತ್ತರ ಕರ್ನಾಟಕ ಭಾಗದಲ್ಲಿ ಅತಿ ಹೆಚ್ಚು ಹತ್ತಿಯನ್ನು ಉತ್ಪಾದಿಸಲಾಗುತ್ತಿದ್ದು ಆ ಭಾಗದ ರೈತರಿಗೆ ಮತ್ತು ಜವಳಿ ಉದ್ಯಮದವರಿಗೆ ಅನುಕೂಲವಾಗುವ ಹಿನ್ನೆಲೆಯಲ್ಲಿ ಯಾವ ಬದಲಾವಣೆಗಳನ್ನು ತರಲಾಗಿದೆ ;

(ಉ) ಕರ್ನಾಟಕ ಕೈಗಾರಿಕ ಅಭಿವೃದ್ಧಿ ನಿಗಮದ (kIIDC) ಕೇಂದ್ರ ಸ್ಥಾನವನ್ನು ಉತ್ತರ ಕರ್ನಾಟಕದ ಹುಬ್ಬಳ್ಳಿಗೆ ಸ್ಥಳಾಂತರಿಸಿದ್ದರೂ ಈ ನಿಗಮದ ಮುಖ್ಯ ಕಾರ್ಯ ಕ್ಷೇತ್ರವು ಬೆಂಗಳೂರಿನಲ್ಲಿಯೇ ನಡೆಯುತ್ತಿದ್ದು, ಇದರ ಸ್ಥಳಾಂತರದ ಬಗ್ಗೆ ಸರ್ಕಾರದ ಸ್ಪಷ್ಟನಿಲುವೇನು ? (ವಿವರ ನೀಡುವುದು)